**ಖಂಡ 1 ಇತ್ಯಾದಿ**

**ಅಧ್ಯಕ್ಷರು :** ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

**ಪ್ರಸ್ತಾವದ ಅಂಗೀಕಾರ**

**ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :** ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ವೈದ್ಯಕೀಯ, ದಂತ ವೈದ್ಯಕೀಯ, ಇಂಜಿನಿಯರಿಂಗ್, ವ್ಯಾಸಂಗ ಕ್ರಮಗಳಿಗೆ (ವಿಶೇಷ ಉಪಬಂಧಗಳು) ಪ್ರವೇಶಕ್ಕಾಗಿ ಅಭ್ಯರ್ಥಿಗಳ ಆಯ್ಕೆ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

**ಅಧ್ಯಕ್ಷರು :** ಪ್ರಸ್ತಾವ ಏನೆಂದರೆ,

"2004 ಕರ್ನಾಟಕ ವೈದ್ಯಕೀಯ, ದಂತ ವೈದ್ಯಕೀಯ, ಇಂಜಿನಿಯರಿಂಗ್, ವ್ಯಾಸಂಗ ಕ್ರಮಗಳಿಗೆ (ವಿಶೇಷ ಉಪಬಂಧಗಳು) ಪ್ರವೇಶಕ್ಕಾಗಿ ಅಭ್ಯರ್ಥಿಗಳ ಆಯ್ಕೆ ವಿಧೇಯಕವನ್ನು ಅಂಗೀಕರಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.**

**6.40 ಪಿ ಎಂ**

**ಗೊಂದಲ**

## 10 ಚುನಾವಣೆ ಪ್ರಸ್ತಾವ

**ಅಧ್ಯಕ್ಷರು :** ಮಾನ್ಯ ಕಂದಾಯ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು "ಈಗಾಗಲೇ ದಿನಾಂಕ: 20.7.2004ರಂದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯಕ್ಕೆ ಹಾಗೂ ಕರ್ನಾಟಕ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಚುನಾವಣೆ ಪ್ರಸ್ತಾವವನ್ನು ಮಂಡಿಸಿದ್ದು, ಚುನಾವಣಾ ಕಾರ್ಯಕ್ರಮ ವೇಳಾಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಅದರಂತೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯಕ್ಕೆ ಮೂವರು ವಿಧಾನ ಸಭೆಯ ಸದಸ್ಯರನ್ನು ಮತ್ತು ಕರ್ನಾಟಕ ಗ್ರಂಥಾಲಯ ಪ್ರಾಧಿಕಾರಕ್ಕೆ ನಾಲ್ವರು ವಿಧಾನ ಸಭಾ ಸದಸ್ಯರನ್ನು ನಾಮನಿರ್ದೇಶನ ಮಾಡಲು ಈ ಸದನವು ಒಪ್ಪಿಗೆ ನಿಡುವುದು".

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

**ಗೊಂದಲ**

**ಅಧ್ಯಕ್ಷರು :** ಮಾನ್ಯ ರಾಜಣ್ಣನವರೇ, ತಾವು ಯಾವುದೋ ಒಂದು ವಿಷಯವನ್ನು ಪ್ರಸ್ತಾಪ ಮಾಡಬೇಕೆಂದು ಹೇಳಿದ್ದೀರಿ. ಆ ವಿಷಯವನ್ನು ಈಗ ಪ್ರಸ್ತಾಪ ಮಾಡಿ.

**ಗೊಂದಲ**

**ಶ್ರೀ ಜಿ.ವಿ. ಶ್ರೀರಾಮರೆಡ್ಡಿ :** ಮಾನ್ಯ ಅಧ್ಯಕ್ಷರೆ, ಈ ರೀತಿಯಾದ ನಡವಳಿಕೆ ಈ ಸದನಕ್ಕೆ ಗೌರವ ತರತಕ್ಕಂಥ ವಿಚಾರವಲ್ಲ. ಇವರೇನೋ ಸದನದ ಬಾವಿಯಲ್ಲಿ ಧರಣಿ ಮಾಡುತ್ತಿದ್ದಾರೆ. ಆದರೆ, ಅವರದು ಬಿಲ್ ಪಾಸ್ ಆದರೂ ಕೂಡ ಅವರೇಕೆ ಕೂಗಬೇಕು?